# ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ. ಶ್ರೀಕಂಠೇಗೌಡ ರವರು ನಿಯಮ-72ರ ಅಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ

**ವಿಷಯ:**

ರಾಜ್ಯದಲ್ಲಿ ಮಧ್ಯಾಹ್ನ ಉಪಹಾರ (ಅಕ್ಷರ ದಾಸೋಹ) ಯೋಜನೆಯಡಿಯಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತ್ ಅಕ್ಷರ ದಾಸೋಹ ಕಛೇರಿಗಳಲ್ಲಿ ಏಪ್ರಿಲ್-2021 ರಿಂದ 208 ಜನ ಡಾಟಾ ಎಂಟ್ರಿ ಆಪರೇಟರ್‌ಗಳಿಗೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿದ್ದರೂ ಸದರಿಯವರನ್ನು ಸೇವೆಯಲ್ಲಿ ಮುಂದುವರಿಸಿರುವುದಿಲ್ಲ ಹಾಗೂ ಜಿಲ್ಲಾ ಮತ್ತು ತಾಲ್ಲೂಕು ಹಂತದಲ್ಲಿ 208 ಜನ ಡಿ ಗ್ರೂಪ್ ನೌಕರರನ್ನು 2019-20ರಿಂದ ಸೇವೆಯಿಂದ ಬಿಡುಗಡೆ ಮಾಡಿದ್ದು. ಸದರಿ ಡಾಟಾ ಎಂಟ್ರಿ ಆಪರೇಟರ್ ಮತ್ತು ಡಿ ಗ್ರೂಪ್ ನೌಕರರನ್ನು ಸೇವೆಯಲ್ಲಿ ಮುಂದುವರಿಸುವ ಬಗ್ಗೆ.

**ಉತ್ತರ:**

2021-22ನೇ ಸಾಲಿನ ಮಧ್ಯಾಹ್ನ ಉಪಹಾರ ಯೋಜನೆಗೆ ಸಂಬಂಧಿಸಿದ ವಾರ್ಷಿಕ ಕ್ರಿಯಾ ಯೋಜನೆ ಅನುಮೋದನೆ ನೀಡಲಾದ ಕೇಂದ್ರ ಸರ್ಕಾರದ ಪಿ.ಎ.ಬಿ ಸಭಾ ನಡವಳಿಯಲ್ಲಿ **ನಿರ್ವಹಣೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಚಟುವಟಿಕೆಗಳಿಗೆ ರೂ 1316.43 ಲಕ್ಷಗಳ** ವಾರ್ಷಿಕ ಅನುದಾನವನ್ನು ನಿಗದಿಪಡಿಸಲಾಗಿದೆ. ಸದರಿ ಅನುದಾನದಲ್ಲಿ ಜಿಲ್ಲಾ ಹಂತದಲ್ಲಿ 32 ಡಾಟಾ ಎಂಟ್ರಿ ಆಪರೇಟರ್‌ಗಳ ಮತ್ತು ತಾಲ್ಲೂಕು ಹಂತದಲ್ಲಿ 176 ಡಾಟಾ ಎಂಟ್ರಿ ಆಪರೇಟರ್‌ಗಳ ಒಟ್ಟಾರೆಯಾಗಿ 208 ಡಾಟಾ ಎಂಟ್ರಿ ಆಪರೇಟರ್‌ಗಳ ಸೇವೆಯನ್ನು 2021-22ನೇ ಸಾಲಿನಲ್ಲಿ ಮುಂದುವರಿಸಲು ಆರ್ಥಿಕ ಇಲಾಖೆಯಿಂದ ದಿನಾಂಕ: 09-12-2021 ರಂದು ಸಹಮತಿ ನೀಡಲಾಗಿದೆ. ಆರ್ಥಿಕ ಇಲಾಖೆಯಿಂದ ನೀಡಲಾಗಿರುವ ಸಹಮತಿಯಂತೆ 208 ಡಾಟಾ ಎಂಟ್ರಿ ಆಪರೇಟರ್‌ಗಳ ಸೇವೆಯನ್ನು 2021-22ನೇ ಸಾಲಿನಲ್ಲಿ ಮುಂದುವರಿಸಲು ಕ್ರಮವಹಿಸಲಾಗಿದೆ.

2019-20ನೇ ಸಾಲಿನಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯ ಜಿಲ್ಲಾ ಮತ್ತು ತಾಲ್ಲೂಕು ಕಛೇರಿಗಳಲ್ಲಿ ಹೊರಗುತ್ತಿಗೆ ಆಧಾರದ ಮೇರೆಗೆ 208 ಡಿ.ದರ್ಜೆ ನೌಕರರ ಸೇವೆಯನ್ನು ಮುಂದುವರಿಸಲಾಗಿದೆ. ಆದರೆ 2020-21ನೇ ಸಾಲಿನಲ್ಲಿ 208 ಡಿ.ದರ್ಜೆ ನೌಕರರ ಸೇವೆಯನ್ನು ಮುಂದುವರಿಸಲು ಆರ್ಥಿಕ ಇಲಾಖೆಯು ಸಹಮತಿ ನೀಡದ ಕಾರಣ ಡಿ.ದರ್ಜೆ ನೌಕರರನ್ನು ಹೊರಗುತ್ತಿಗೆ ಆಧಾರದ ಮೇರೆಗೆ ಮುಂದುವರೆಸಲು ಸಾಧ್ಯವಾಗಿರುವುದಿಲ್ಲ.

ಮಧ್ಯಾಹ್ನ ಉಪಹಾರ ಯೋಜನೆಯು ಕೇಂದ್ರ ಪುರಸ್ಕೃತ ಯೋಜನೆಯಾಗಿದ್ದು, ಈ ಯೋಜನೆಯನ್ನು ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಅನುಷ್ಠಾನ ಮಾಡಲಾಗುತ್ತಿದೆ. ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ

ಮಧ್ಯಾಹ್ನ ಉಪಹಾರ ಯೋಜನೆಯ ನಿರ್ವಹಣೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಚಟುವಟಿಕೆಗಳ ವೆಚ್ಚಗಳನ್ನು ಭರಿಸಲು ನಿಗದಿಪಡಿಸಲಾಗಿರುವ ವಾರ್ಷಿಕ ಅನುದಾನದಿಂದ ಮಾತ್ರ ಹೊರಗುತ್ತಿಗೆ ನೌಕರರ ಸಂಭಾವನೆಯನ್ನು ಪಾವತಿಸಲು ಅವಕಾಶವಿದ್ದು, ಇದರ ಹೊರತಾಗಿ ಯಾವುದೇ ಅನುದಾನ ನಿಗದಿಯಾಗಿರುವುದಿಲ್ಲ.

ಪ್ರಸ್ತುತ 2021-22ನೇ ಸಾಲಿನಲ್ಲಿ ನಿರ್ವಹಣೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಚಟುವಟಿಕೆಗಳಿಗೆ ನಿಗದಿಯಾಗಿರುವ **ರೂ 1316.43 ಲಕ್ಷಗಳ** ವಾರ್ಷಿಕ ಅನುದಾನದಲ್ಲಿ ಮಧ್ಯಾಹ್ನ ಉಪಹಾರ ಯೋಜನೆಯ ರಾಜ್ಯ ಕಛೇರಿಯ, ಜಿಲ್ಲಾ, ತಾಲ್ಲೂಕು ಮತ್ತು ಶಾಲಾ ಹಂತದ ವಿವಿಧ ನಿರ್ವಹಣೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ (MME) ಚಟುವಟಿಕೆಗಳಿಗೆ ಸಂಬಂಧಿಸಿದ ವೆಚ್ಚಗಳನ್ನು ಭರಿಸಲು **ರೂ 794.69 ಲಕ್ಷಗಳ** ಅನುದಾನವನ್ನು ನಿಗದಿಪಡಿಸಲಾಗಿದ್ದು, ಉಳಿಕೆಯಾಗಿವ **ರೂ 521.74 ಲಕ್ಷಗಳ** ಅನುದಾನದಲ್ಲಿ 208 ಡಾಟಾ ಎಂಟ್ರಿ ಆಪರೇಟರ್ ಗಳ ಸಂಭಾವನೆಯನ್ನು ಭರಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ 208 ಡಿ.ದರ್ಜೆ ನೌಕರರ ವಾರ್ಷಿಕ ಸಂಭಾವನೆಯನ್ನು ಪಾವತಿಸಲು ಅಗತ್ಯವಿರುವ ಅನುದಾನವನ್ನು 2021-22ನೇ ಸಾಲಿನಲ್ಲಿ ನಿರ್ವಹಣೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಚಟುವಟಿಕೆಗಳಿಗೆ ನಿಗದಿಯಾಗಿರುವ ಅನುದಾನದಿಂದ ಭರಿಸಲು ಸಾಧ್ಯವಾಗದ ಕಾರಣ 208 ಡಿ.ದರ್ಜೆ ನೌಕರರ ಸೇವೆಯನ್ನು ಮುಂದುವರೆಸಲು ಅವಕಾಶವಿರುವುದಿಲ್ಲ.

ಇಪಿ 70 ಎಂಎಂಎಸ್ 2021

(ಬಿ.ಸಿ. ನಾಗೇಶ್)
**ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ**
**ಸಕಾಲ ಸಚಿವರು**